## ದಿನಾಂಕ: 13/08/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BWSSB |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135 | BESCOM |
| 3 | ಶ್ರೀ. ಗೋವರ್ಧನ .ಕೆ | ಕಂದಾಯ ವಸೂಲಿಗಾರರು, ವಾರ್ಡ್ ಸಂಖ್ಯೆ: 135 | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 4 | ಶ್ರೀ. ವೆಂಕಟರಾಮ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಆರೋಗ್ಯ ವೈದ್ಯಾಧಿಕಾರಿಗಳು |
| 5 | ಶ್ರೀಮತಿ. ಸುಧಾ.ಎಸ್ | ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ. ಚಂದ್ರಯ್ಯ | ಎ.ಎಸ್.ಐ | |
| 7 | ಶ್ರೀ. ಶ್ರೀನಿವಾಸ್ | ಹೆಡ್‌ಕಾನ್ಸ್‌ಟೇಬಲ್ | |
| 8 | ಶ್ರೀ. ರಾಜಶೇಖರಯ್ಯ | ಹೆಡ್‌ಕಾನ್ಸ್‌ಟೇಬಲ್ 7074 | |
| 9 | ಶ್ರೀ. ಪ್ರಕಾಶ್ .ಟಿ | ಎ.ಎಸ್.ಐ, ಮಾಗಡಿ ರಸ್ತೆ | |
| 10 | ಶ್ರೀ.ರಾಮಚಂದ್ರಯ್ಯ | ಎ.ಎಸ್.ಐ, ಜೆ.ಜೆ.ಆರ್ ನಗರ ಪಿಎಸ್ | |
| 11 | ಶ್ರೀ. ಭಾರ್ಗವ್ ಎಸ್ | ಮಾರ್ಷಲ್ | |
| 12 | ಶ್ರೀ. ಅಫ್ರೋಜ್ ಖಾನ್ | ಸಮಾಜ ಸೇವಕರು | |
| 13 | ಶ್ರೀ. ಅಫ್ಸರ್ ಪಾಷಾ | ಸಮಾಜ ಸೇವಕರು | |
| 14 | ಶ್ರೀ. ಅಸ್ಲಾಮ್ ಪಾಷ | ವಾರ್ಡ್ ಸದಸ್ಯರು | |
| 15 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. <u>ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:</u>

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | BWSSB ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ | ಸಭೆಯಲ್ಲಿ ನೀರು ಮತ್ತು ಒಳಚರಂಡಿಗೆ ಸಂಬಂಧಪಟ್ಟಂತೆ ಹಲವಾರು ದೂರುಗಳು ಬರುತ್ತಿದ್ದು, ದೂರುಗಳನ್ನು ಅಹವಾಲಿಸಿ ಪರಿಹರಿಸಲು ಸಂಬಂದಪಟ್ಟ BWSSB ಅಧಿಕಾರಿಗಳು ಸಭೆಗೆ ಹಾಜರಾಗದಿರುವ ಬಗ್ಗೆ ಅಧ್ಯಕ್ಷರು ಗಮನಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |

...ಪ್ರ.ತಿ.ನೋ

Scanned by CamScanner

| | | | |
|---|---|---|---|
| 2 | ಅರಫತ್ ನಗರ 13ನೇ ಕ್ರಾಸ್‌ನಲ್ಲಿ ಹೊಸ ಒಳಚರಂಡಿ ಕೊಳವೆಯು Block ಆಗುತ್ತಿರುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಅರಫತ್ ನಗರ 13ನೇ ಕ್ರಾಸ್‌ನಲ್ಲಿ ಹೊಸದಾಗಿ ಒಳಚರಂಡಿ ಕೊಳವೆ ಅಳವಡಿಸಲಾಗಿದ್ದು, ಆದರೆ ಪ್ರಸ್ತುತ ಈ ಕೊಳವೆಯು Block ಆಗುತ್ತಿರುವ ಬಗ್ಗೆ ಸಭೆಯಲ್ಲಿ ದೂರು ನೀಡುತ್ತಿದ್ದು, ಇದಕ್ಕೆ ಪ್ರತಿಯಾಗಿ ಅದ್ಯಕ್ಷರು ಸಂಬಂಧಪಟ್ಟ ಅಧಿಕರಿಗಳಿಗೆ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಯಿತು. | ಸಹಾಯಕ ಅಭಿಯಂತರರು BWSSB |
| 3 | ರಸ್ತೆ ಗುಂಡಿ ಮುಚ್ಚುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದ ಹಾಗೂ BWSSB ಒಳಚರಂಡಿ ದುರಸ್ಥಿ ಕಾಮಗಾರಿಗಳಿಂದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇದನ್ನು ಮುಚ್ಚಲು ಅಗತ್ಯ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |
| 4 | ವಾರ್ಡ್ ವ್ಯಾಪ್ತಿಯಲ್ಲಿ ಮೆಡಿಕಲ್ ವೇಸ್ಟ್ ತ್ಯಾಜ್ಯವನ್ನು ಅನಧೀಕೃತವಾಗಿ ರಸ್ತೆ ಬದಿಯಲ್ಲಿ ಸುರಿಯುತ್ತಿರುವ ಬಗ್ಗೆ | ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಮೆಡಿಕಲ್ ವೇಸ್ಟ್ ಉತ್ಪತ್ತಿ ಮಾಡುತ್ತಿರುವ ಆಸ್ಪತ್ರೆ ಮತ್ತು ಮೆಡಿಕಲ್ ಶಾಪ್‌ಗಳನ್ನು ಪರಿಶೀಲಿಸಿ ಸೂಕ್ತ ಕ್ರಮವನ್ನು ಜಾರಿ ಮಾಡುವಂತೆ ಆರೋಗ್ಯ ವೈಧ್ಯಾಧಿಕಾರಿಗಳಿಗೆ ಸೂಚಿಸಲಾಯಿತು. | ಆರೋಗ್ಯ ವೈಧ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) |
| 5 | ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸುವ ಬಗ್ಗೆ | ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕೆಗಳು ಹೆಚ್ಚಾಗುತ್ತಿದ್ದು, ಈ ಬಗ್ಗೆ ಸದರಿ ಕೈಗಾರಿಕೆಗಳ ಪರವಾನಗಿಯ ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮವನ್ನು ಜಾರಿ ಮಾಡುವಂತೆ ಆರೋಗ್ಯ ವೈಧ್ಯಾಧಿಕಾರಿಗಳಿಗೆ ಸೂಚಿಸಲಾಯಿತು. | ಆರೋಗ್ಯ ವೈಧ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ) |
| 6 | ಹೊಸಹಳ್ಳಿ ಮುಖ್ಯರಸ್ತೆಯ ಬ್ರಿಡ್ಜ್ ಮತ್ತು ಪೈಪ್‌ಲೈನ್ ರಸ್ತೆಯ ಬೀದಿದೀಪಗಳನ್ನು ಅಳವಡಿಸುವಂತೆ ಸಭೆಯಲ್ಲಿ ಕೋರಲಾಯಿತು. | ಸಭೆಯಲ್ಲಿ ಹೊಸಹಳ್ಳಿ ಮುಖ್ಯರಸ್ತೆ ಬ್ರಿಡ್ಜ್ ಹಾಗೂ ಪೈಪ್‌ಲೈನ್ ರಸ್ತೆಯು ವಾರ್ಡ್‌ನ ಪ್ರಮುಖ ರಸ್ತೆಯಾಗಿದ್ದು, ಈ ಸ್ಥಳಗಳಲ್ಲಿ ಬೀದಿದೀಪಗಳಿಲ್ಲದೆ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯೊಂಟಾಗುತ್ತಿದ್ದು ಹಾಗಿ ರಾತ್ರಿ ವೇಳೆಯಲ್ಲಿ ಈ ಪ್ರಸಾಪಿತ ಸ್ಥಳಗಳಲ್ಲಿ ಅಹಿತಕರ ಘಟನೆಗಳು ಸಂಭವವಿರುವುದರಿಂದ ಬೀದಿದೀಪಗಳನ್ನು ದುರಸ್ಥಿಪಡಿಸಲು ವಿದ್ಯುತ್ ವಿಭಾಗದವರಿಗೆ ಅಗತ್ಯ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಕಿರಿಯ ಅಭಿಯಂತರರು (ವಿದ್ಯುತ್) |

Scanned by CamScanner

| | | | |
|---|---|---|---|
| 7 | ಪಾದರಾಯನಪುರ ಮುಖ್ಯರಸ್ತೆಯಲ್ಲಿ ಪಾರ್ಕಿಂಗ್ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಪಾದರಾಯನಪುರ ಮುಖ್ಯಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನ್ನು ಸಮ ಬೆಸ ಮಾದರಿಯಲ್ಲಿ ಅಳವಡಿಸಲು ಪೊಲೀಸ್ ಸಂಚಾರಿ ಇಲಾಖೆಗೆ ಪತ್ರ ಬರೆದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಪೊಲೀಸ್ ಸಂಚಾರಿ ವಿಭಾಗ |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner